## ಕರ್ನಾಟಕ ಸರ್ಕಾರದ ನಡವಳಿಗಳು.

ವಿಷಯ: ಚಿಕ್ಕಬಳ್ಳಾಪುರ ಜಿಲ್ಲೆ, ಶಿಡ್ಲಘಟ್ಟ ತಾಲ್ಲೂಕು, ಜಂಗಮಕೋಟೆ ಹೋಬಳಿ, ಅಮರಾವತಿ ಗ್ರಾಮದ ಸ.ನಂ.47 ರಲ್ಲಿ 53-25 ಎಕರೆ ಗೋಮಾಳ ಜಮೀನನ್ನು ಬೆಂಗಳೂರು ಉತ್ತರ ವಿಶ್ವವಿದ್ಯಾಲಯ ಸ್ಥಾಪನೆಗಾಗಿ ಉನ್ನತ ಶಿಕ್ಷಣ ಇಲಾಖೆಗೆ ಉಚಿತವಾಗಿ ಮಂಜೂರು ಮಾಡುವ ಕುರಿತು.

ಓದಲಾಗಿದೆ:1) ಸರ್ಕಾರದ ಆದೇಶ ಸಂಖ್ಯೆ:ಆರ್‌ಡಿ 83 ಎಲ್‌ಜಿಕೆ 2015 ದಿನಾಂಕ:28.04.2017.

2) ಜಿಲ್ಲಾಧಿಕಾರಿ, ಚಿಕ್ಕಬಳ್ಳಾಪುರ ಜಿಲ್ಲೆ ಇವರ ಪತ್ರ ಸಂಖ್ಯೆ: ಎಲ್‌ಎನ್‌ಡಿ/ಸಿಆರ್/41/2015-16 ದಿನಾಂಕ: 01-07-2017 ಮತ್ತು ದಿನಾಂಕ: 25-01-2018.

* * *

<u>ಪ್ರಸ್ತಾವನೆ:</u>

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಸರ್ಕಾರದ ಆದೇಶ ದಿನಾಂಕ:28.04.2017 ರಲ್ಲಿ ಶಿಡ್ಲಘಟ್ಟ ತಾಲ್ಲೂಕು, ಜಂಗಮಕೋಟೆ ಹೋಬಳಿ, ಅಮರಾವತಿ ಗ್ರಾಮದ ಸ.ನಂ. 47 ರಲ್ಲಿ 57-00 ಎಕರೆ ಜಮೀನನ್ನು ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1966ರ ನಿಯಮ 22(ಎ)(3)(i) ರನ್ವಯ ಉನ್ನತ ಶಿಕ್ಷಣ ಇಲಾಖೆಗೆ ಉಚಿತವಾಗಿ ಕೆಲವು ಷರತ್ತಿಗೊಳಪಟ್ಟು ಮಂಜೂರು ಮಾಡಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2)ರ ಜಿಲ್ಲಾಧಿಕಾರಿ, ಚಿಕ್ಕಬಳ್ಳಾಪುರ ಜಿಲ್ಲೆ ಇವರು ದಿನಾಂಕ 01-07-2017 ರಂದು ಸಲ್ಲಿಸಿರುವ ಪತ್ರದಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆ, ಶಿಡ್ಲಘಟ್ಟ ತಾಲ್ಲೂಕು, ಜಂಗಮಕೋಟೆ ಹೋಬಳಿ, ಅಮರಾವತಿ ಗ್ರಾಮದ ಸ.ನಂ.47 ರಲ್ಲಿ ಒಟ್ಟು 496.36 ಎಕರೆ ಗೋಮಾಳ ಜಮೀನು ಇದ್ದು, ಆ ಪೈಕಿ ಈಗಾಗಲೇ 57-00 ಎಕರೆ ಜಮೀನನ್ನು ಮಂಜೂರು ಮಾಡಲಾಗಿದ್ದು, ಸದರಿ ಸರ್ವೆ ನಂಬರ್‌ನ ಜಮೀನಿನ ಪೈಕಿ ಒತ್ತುವರಿದಾರರಿಂದ ತೆರವುಗೊಳಿಸಲಾದ ಹಾಗೂ ಎಲ್ಲಾ ಋಣಭಾರಗಳಿಂದ ಮುಕ್ತವಾಗಿರುವ ಪುನ: 53.25 ಎಕರೆ ಜಮೀನನ್ನು ಸಹ ಮಂಜೂರು ಮಾಡುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಮುಂದುವರೆದು, ಮೋಜಣಿದಾರರು ಚಕ್ಕುಬಂದಿಯೊಂದಿಗೆ ಪ್ರಸ್ತಾಪಿತ ಜಮೀನಿನ ನಕ್ಷೆಯನ್ನು ತಯಾರಿಸಿರುತ್ತಾರೆ. ಹಾಗೂ ಅಮರಾವತಿ ಗ್ರಾಮದ ಗ್ರಾಮಸ್ಥರ ಸಮ್ಮುಖದಲ್ಲಿ ಮಹಜರ್ ನಡೆಸಲಾಗಿರುತ್ತದೆ. ಪ್ರಸ್ತಾಪಿತ ಪ್ರದೇಶವು ಶಿಡ್ಲಘಟ್ಟ ನಗರಸಭೆ ವ್ಯಾಪ್ತಿಯಿಂದ ಸುಮಾರು 16 ಕಿ.ಮೀ. ದೂರದಲ್ಲಿದ್ದು, ಯಾವುದೇ ವಿದ್ಯುತ್ ತಂತಿ ಸದರಿ ಪ್ರದೇಶದಲ್ಲಿ ಹಾದು ಹೋಗಿರುವುದಿಲ್ಲ ಹಾಗೂ ಬೆಲೆ ಬಾಳುವ ಮರ ಮಾಲ್ಕಿಗಳು ಇರುವುದಿಲ್ಲ. ಸದರಿ ಗ್ರಾಮದಲ್ಲಿ 175 ಜಾನುವಾರುಗಳಿದ್ದು, ಈ ಜಾನುವಾರುಗಳಿಗೆ ಅನುಗುಣವಾಗಿ 45-00 ಎಕರೆ ಜಮೀನನ್ನು ಕಾಯ್ದಿರಿಸಬೇಕಾಗುತ್ತದೆ. ಹಾಗೂ ಪ್ರಸ್ತಾಪಿತ ಗ್ರಾಮಕ್ಕೆ ಹೊಂದಿಕೊಂಡಿರುವ ಸ.ನಂ.98 ರಲ್ಲಿ 135-00 ಎಕರೆ ಜಮೀನು ಇರುತ್ತದೆ. ಈ ಪೈಕಿ ವಿವಿಧ ಉದ್ದೇಶಗಳಿಗೆ ಜಮೀನು ವಿಲೇವಾರಿಯಾಗಿದ್ದು, ಸದರಿ ಜಮೀನಿನಲ್ಲಿಯೂ ಸಹ 33-00 ಎಕರೆ ಗೋಮಾಳ ಜಮೀನು ಲಭ್ಯವಿರುತ್ತದೆಂದು ವರದಿಯಲ್ಲಿ ತಿಳಿಸಲಾಗಿದೆ. ಅಮರಾವತಿ ಗ್ರಾಮದಲ್ಲಿ ಬಹುತೇಕ ಎಲ್ಲವೂ ಹೈನುಗಾರಿಕೆಗಾಗಿ ಸೀಮೆ ಹಸುಗಳಿದ್ದು, ಗೋಮಾಳದಲ್ಲಿ ಮೇಯುವಂತಹ ನಾಟಿ ಹಸುಗಳು ಇರುವುದಿಲ್ಲವೆಂದು ಹಾಗೂ ಪ್ರಸ್ತಾಪಿತ ಉದ್ದೇಶಕ್ಕೆ ಜಮೀನು ಮಂಜೂರು ಮಾಡಲು ಗ್ರಾಮಸ್ಥರ ಅಭ್ಯಂತರ ಇರುವುದಿಲ್ಲವೆಂದು ವರದಿ ಮಾಡಿರುತ್ತಾರೆ.

Cont...

ಕುಲಸಚಿವರು, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಬೆಂಗಳೂರು ಇವರು ಸಲ್ಲಿಸಿರುವ ದಿನಾಂಕ: 16-01-2018ರ ಪತ್ರದಲ್ಲಿ ತಿಳಿಸಿರುವಂತೆ, 2018-19ನೇ ಸಾಲಿನಿಂದ ಪ್ರಾರಂಭಿಸಲು ಯೋಜಿಸಿರುವ ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ಹೊಸ ಕ್ಯಾಂಪಸ್ ಮೂಲಭೂತ ಸೌಕರ್ಯಗಳ ನಿರ್ಮಾಣ, ರಸ್ತೆ, ಕಟ್ಟಡ, ಪ್ರಯೋಗಶಾಲೆ, ವಿದ್ಯಾರ್ಥಿ ನಿಲಯ ಇತ್ಯಾದಿಗಳ ಬಗ್ಗೆ ಸಮಗ್ರ ಯೋಜನೆ (Master Plan) ತಯಾರಿಸಬೇಕಾಗಿರುವುದರಿಂದ, ಈಗಾಗಲೇ ಸರ್ಕಾರದ ವತಿಯಿಂದ ಮಂಜೂರಾತಿ ನೀಡಿರುವ 57-00 ಎಕರೆ ಜಮೀನಿನ ಜೊತೆಗೆ ಈಗ ಮಂಜೂರು ಮಾಡಲು ಕೋರಿರುವ 53.25 ಎಕರೆ ಮತ್ತು ಮುಕ್ತ ಮಾರುಕಟ್ಟೆಯಿಂದ ಖರೀದಿಸಲು ಉದ್ದೇಶಿಸಲಾಗಿರುವ 61-15 ಎಕರೆ ಸೇರಿದಂತೆ ಒಟ್ಟು 172-00 ಎಕರೆ ಜಮೀನಿನ ಅವಶ್ಯಕತೆ ಇರುವುದಾಗಿ ತಿಳಿಸಿರುತ್ತಾರೆ.

ಜಿಲ್ಲಾಧಿಕಾರಿ, ಚಿಕ್ಕಬಳ್ಳಾಪುರ ಜಿಲ್ಲೆ ಇವರ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ ಆರ್‌ಡಿ 46 ಎಲ್‌ಜಿಕೆ 2017,**
**ಬೆಂಗಳೂರು ದಿನಾಂಕ: 19-03-2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಚಿಕ್ಕಬಳ್ಳಾಪುರ ಜಿಲ್ಲೆ, ಶಿಡ್ಲಘಟ್ಟ ತಾಲ್ಲೂಕು, ಜಂಗಮಕೋಟೆ ಹೋಬಳಿ, ಅಮರಾವತಿ ಗ್ರಾಮದ ಸ.ನಂ.47 ರಲ್ಲಿ 53-25 ಎಕರೆ ಜಮೀನನ್ನು ಕರ್ನಾಟಕ ಭೂ ಕಂದಾಯ ನಿಯಮಗಳು, 1966ರ ನಿಯಮ 97(4) ರಡಿಯಲ್ಲಿ ಗೋಮಾಳ ಶೀರ್ಷಿಕೆಯಿಂದ ತಗ್ಗಿಸಿ, ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ಸ್ಥಾಪನೆ ಉದ್ದೇಶಕ್ಕಾಗಿ ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969ರ ನಿಯಮ 22-ಎ(3)(i) ಉನ್ನತ ಶಿಕ್ಷಣ ಇಲಾಖೆಗೆ ಉಚಿತವಾಗಿ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಮಂಜೂರು ಮಾಡಿ ಆದೇಶಿಸಿದೆ.

1. ಜಮೀನು ಹಸ್ತಾಂತರ ಪ್ರಕ್ರಿಯೆಯನ್ನು ಜಿಲ್ಲಾಧಿಕಾರಿ, ಚಿಕ್ಕಬಳ್ಳಾಪುರ ಜಿಲ್ಲೆ ಇವರು ನಿಯಮಾನುಸಾರ ಕ್ರಮವಹಿಸತಕ್ಕದ್ದು.
2. ಸದರಿ ಜಮೀನನ್ನು ಯಾವ ಉದ್ದೇಶಕ್ಕೆ ಮಂಜೂರು ಮಾಡಲಾಗಿದೆಯೋ, ಅದೇ ಉದ್ದೇಶಕ್ಕಾಗಿ ಮಾತ್ರ ಎರಡು ವರ್ಷಗಳ ಅವಧಿಯೊಳಗೆ ಉಪಯೋಗಿಸತಕ್ಕದ್ದು.
3. ಮಂಜೂರಾದ ಜಮೀನನ್ನು ಕಂದಾಯ ಇಲಾಖೆಯ ಅನುಮತಿ ಇಲ್ಲದೆ ಮಾರಾಟ ಮಾಡುವುದಾಗಲೀ, ಗುತ್ತಿಗೆ/ಉಪಗುತ್ತಿಗೆಗೆ ನೀಡುವುದಾಗಲೀ, ಅಡಮಾನ, ವರ್ಗಾವಣೆ, ದಾನ, ಇತರೆ ಯಾವುದೇ ರೀತಿಯ ಪರಭಾರೆಯನ್ನು ಮಾಡಬಾರದು. ವಾಣಿಜ್ಯ ಚಟುವಟಿಕೆಗೆ ಬಳಸಬಾರದು.
4. ಮಂಜೂರಾದ ಜಮೀನಿನಲ್ಲಿ ಯಾವುದೇ ರೀತಿಯ ಅತಿಕ್ರಮಣವಾಗದಂತೆ ಕ್ರಮವಹಿಸತಕ್ಕದ್ದು ಹಾಗೂ ಸದರಿ ಜಮೀನು ಇಲಾಖೆಗೆ ಅವಶ್ಯವಿಲ್ಲವೆಂದು ಕಂಡುಬಂದಲ್ಲಿ ಕಂದಾಯ ಇಲಾಖೆಗೆ ಹಿಂದಿರುಗಿಸತಕ್ಕದ್ದು.
5. ಮಂಜೂರಾದ ಜಮೀನಿನಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಪ್ರಾರಂಭಿಸುವ ಪೂರ್ವದಲ್ಲಿ ಶಾಸನಬದ್ಧವಾಗಿ ಪಡೆಯಬೇಕಾದ ಪರವಾನಗಿಗಳನ್ನು ಸಂಬಂಧಿತ ಪ್ರಾಧಿಕಾರಗಳಿಂದ ಪಡೆಯತಕ್ಕದ್ದು ಹಾಗೂ ನಿಯಮಾನುಸಾರ ಪಾವತಿಸಬೇಕಾದ ಎಲ್ಲಾ ರೀತಿಯ ಶುಲ್ಕಗಳನ್ನು ಕಡ್ಡಾಯವಾಗಿ ಪಾವತಿಸತಕ್ಕದ್ದು.

Cont...

6. ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969 ರಲ್ಲಿನ ಮಂಜೂರಾತಿ ನಿಯಮಗಳಿಗೆ ಬದ್ಧವಾಗಿರತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

19.3.18

(ಎಸ್.ಎಲ್.ಮಹಾಂತೇಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ (ಭೂಮಂಜೂರಾತಿ-1).

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಬೆಂಗಳೂರು, (ಇದನ್ನು ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ 50 ಪ್ರತಿಗಳನ್ನು ಕಂದಾಯ ಇಲಾಖೆಗೆ ಕೋರುತ್ತಾ).

ಇವರಿಗೆ:

1. ಮಹಾಲೇಖಪಾಲರು (ಎ & ಇ ಲೆಕ್ಕಪರಿಶೋಧನೆ-1, ಲೆಕ್ಕ ಪರಿಶೋಧನೆ-2), ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿ ಕಟ್ಟಡ, ಬೆಂಗಳೂರು.
3. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು.
4. ಜಿಲ್ಲಾಧಿಕಾರಿ, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ.
5. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಚಿವ ಸಂಪುಟ ವಿಷಯ ಸಂಖ್ಯೆ:(ಸಿ.262/2018), ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಉಪ ಕಾರ್ಯದರ್ಶಿ, ಕಂದಾಯ ಇಲಾಖೆ(ಸಮನ್ವಯ), ಬಹುಮಹಡಿ ಕಟ್ಟಡ, ಬೆಂಗಳೂರು (ಕಾಂಪೆಂಡಿಯಂನಲ್ಲಿ ಸೇರ್ಪಡೆ ಮಾಡಲು)
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-7), ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿ ಕಟ್ಟಡ, ಬೆಂಗಳೂರು.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿ ಮಾಹಿತಿಗಾಗಿ :

1. ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿರವರ ಆಪ್ತ ಸಹಾಯಕ, ಕಂದಾಯ ಇಲಾಖೆ, (ಭೂ ಮಂಜೂರಾತಿ) ಬಹುಮಹಡಿ ಕಟ್ಟಡ, ಬೆಂಗಳೂರು.

19/3.

Cont...